ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 1275 (1231)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಕಂದಾಯ ಸಚಿವರು

ವಿಷಯ : ಕೆ.ಪಿ.ಎಸ್.ಸಿ.,ಯಲ್ಲಿ 2015 ನೇ ಸಾಲಿನಲ್ಲಿ ಗ್ರೇಡ್-2 ತಹಶೀಲ್ದಾರ್ ನೇಮಕಾತಿ ಕುರಿತು

(ಅ) ಕರ್ನಾಟಕ ಲೋಕಸೇವಾ ಆಯೋಗವು 2015 ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳಿಗೆ ನಡೆಸಲಾದ ಪರೀಕ್ಷೆಯಲ್ಲಿ ಎಷ್ಟು ತಹಶೀಲ್ದಾರ್ (ಗ್ರೇಡ್-2) (ಮೂಲವೃಂದ) ಹುದ್ದೆಗಳಿಗೆ ಆಯ್ಕೆ ಮಾಡಿ ನೇಮಕಾತಿಗಾಗಿ ಸರ್ಕಾರಕ್ಕೆ ಕಳುಹಿಸಲಾಗಿದೆ ;

(ಆ) ಈ ಹುದ್ದೆಗಳ ಪೈಕಿ ನೇಮಕಾತಿ ಆದೇಶ ನೀಡುವ ಮುನ್ನ ದಾಖಲಾತಿಗಳ ಪರಿಶೀಲನೆಗಾಗಿ ದಾಖಲಾತಿಗಳನ್ನು ಒದಗಿಸಲು ತಿಳಿಸಿದ ನಂತರವೂ, ದಾಖಲಾತಿಗಳನ್ನು ಒದಗಿಸದೇ ಗೈರು ಹಾಜರಾದ ಅಥವಾ ಹುದ್ದೆಗೆ ಹಾಜರಾಗುವುದಿಲ್ಲವೆಂದು ಲಿಖಿತ ಮೂಲಕ ತಿಳಿಸಿರುವ ಅಭ್ಯರ್ಥಿಗಳ ಸಂಖ್ಯೆ ಎಷ್ಟು ;

(ಇ) ಅಂತಹ ಅಭ್ಯರ್ಥಿಗಳ ಹೆಸರು ಮತ್ತು ಅವರು ಆಯ್ಕೆಯಾಗಿರುವ ಮೀಸಲಾತಿಯ ಪ್ರವರ್ಗಗಳ ವಿವರಗಳನ್ನು ನೀಡುವುದು ;

(ಈ) ಆಯ್ಕೆ ಮಾಡಿ ಸರ್ಕಾರಕ್ಕೆ ಕಳುಹಿಸಲಾದ ಈ ಹುದ್ದೆಗಳ ಪೈಕಿ ನೇಮಕಾತಿ ಆದೇಶ ನೀಡಿದ ನಂತರವೂ., ಈವರೆವಿಗೂ ಕರ್ತವ್ಯಕ್ಕೆ ಎಷ್ಟು ಅಭ್ಯರ್ಥಿಗಳು ವರದಿ ಮಾಡಿಕೊಂಡಿರುವುದಿಲ್ಲ ? (ಅಂತಹ ಅಭ್ಯರ್ಥಿಗಳ ಹೆಸರು ಮತ್ತು ಅವರು ಆಯ್ಕೆಯಾಗಿರುವ ಮೀಸಲಾತಿ ಪ್ರವರ್ಗಗಳ ವಿವರಗಳನ್ನು ನೀಡುವುದು)